ಸ್ಥಳೀಯ ಸಂಸ್ಥೆ ಪಟ್ಟಣ, ಪಂಚಾಯತ್, ಪುರಸಭೆ ಹಾಗೂ ನಗರಸಭೆಗಳು

ಶ್ರೀ ರಾಜು ಕೆ. (ರಾಮನಗರ):–

317 (633) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ಥಳೀಯ ಸಂಸ್ಥೆಗಳಾದ ಪಟ್ಟಣ ಪಂಚಾಯತಿ, ಪುರಸಭೆ ಮತ್ತು ನಗರಸಭೆಯ ನೌಕರರಿಗೆ ರಚಿಸಿರುವ ಮಾದರಿಯಲ್ಲಿಯೇ ಗ್ರಾಮೀಣ ಸ್ಥಳೀಯ ಸಂಸ್ಥೆಯಾದ ಗ್ರಾಮ ಪಂಚಾಯತಿಯಲ್ಲಿ ಕನಿಷ್ಠ ವೇತನದಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರಾಮ ಪಂಚಾಯತಿ ನೌಕರರಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿ, ಸೇವಾ ಭದ್ರತೆ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿಲ್ಲದಿದ್ದಲ್ಲಿ, ಸರ್ಕಾರದ ನಿಲುವೇನು; (ಮಾಹಿತಿ ನೀಡುವುದು)

(ಆ) 3ನೇ ರಾಜ್ಯ ಹಣಕಾಸು ಆಯೋಗವು ನೀಡಿರುವ ಶಿಫಾರಸ್ಸಿನಂತೆ ಗ್ರಾಮ ಪಂಚಾಯತಿ ನೌಕರರಿಗೆ ಸರ್ಕಾರದ ನಿಧಿಯಿಂದ ವೇತನ ರಕ್ಷಿಸಲು ಸರ್ಕಾರವು ಯಾವ ರೀತಿ ಕ್ರಮ ವಹಿಸಲಾಗಿದೆ; ಆ ರೀತಿ ಕ್ರಮವಹಿಸದಿದ್ದಲ್ಲಿ ಕಾರಣವೇನು?

ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):–

(ಅ) ಈ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ

ದಿನಾಂಕ 4–1–2008ರ ಸರ್ಕಾರದ ಅಧಿಕೃತ ಜ್ಞಾಪನದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದ ಮಾದರಿ (ಸ್ಟ್ರಾಪಿಂಗ್ ಪ್ಯಾಟ್ರನ್) ಹಾಗೂ ನೌಕರರ ನೇಮಕಾತಿ ವಿಧಾನದ ಬಗ್ಗೆ ನಿರ್ದಿಷ್ಟಪಡಿಲಾಗಿದೆ.

(ಆ) ಗ್ರಾಮ ಪಂಚಾಯಿತಿಗಳಿಗೆ ವಾರ್ಷಿಕವಾಗಿ ರೂ. 8.00 ಲಕ್ಷಗಳ ಶಾಸನಬದ್ಧ ಅನುದಾನ ಬಿಡುಗಡೆ ಮಾಡುತ್ತಿದ್ದು, ಈ ಅನುದಾನದ ಪೈಕಿ ಶೇಕಡ 40 ರಷ್ಟು ಅನುದಾನವನ್ನು ಗ್ರಾಮ ಪಂಚಾಯಿತಿ ನೌಕರರ ವೇತನ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ.